# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 814(1043) |
| ಉತ್ತರಿಸುವ ದಿನಾಂಕ | 10-03-2021 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಉಪನೋಂಣಾಧಿಕಾರಿ ಕಛೇರಿಗಳಿವೆ: | ರಾಜ್ಯದಲ್ಲಿ ಒಟ್ಟು 252 ಉಪನೋಂದಣಿ ಕಛೇರಿಗಳು ಕಾರ್ಯ ನಿರ್ವಹಿಸುತ್ತಿರುತ್ತದೆ. |
| ಆ) | ಆಸ್ತಿ ನೋಂದಣಿಗಾಗಿ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಿದ್ದು, ಸರ್ವರ್ ಸಮಸ್ಯೆಯಿಂದ ಆಸ್ತಿ ನೋಂದಣಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು ಬಂದಿರುತ್ತದೆ. |
| ಇ) | ಬಂದಿದ್ದಲ್ಲಿ ಸರ್ಕಾರಕ್ಕೆ ರಾಜಸ್ವ ತಂದು ಕೊಡುವ ಈ ಇಲಾಖೆಯನ್ನು ತಾಂತ್ರಿಕವಾಗಿ ಸಬಲಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು: | ಸರ್ವರ್ ಸಮಸ್ಯೆಯಿಂದ ಕೆಲವೊಮ್ಮೆ ದಸ್ತಾವೇಜು ನೋಂದಣಿಯು ವಿಳಂಬವಾಗುತ್ತಿದ್ದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶವನ್ನು 2008ರಲ್ಲಿ ಭೂಮಿ ತಂತ್ರಾಂಶದೊಂದಿಗೆ, 2014ರಲ್ಲಿ ಇ-ಸ್ವತ್ತು ತಂತ್ರಾಂಶದೊಂದಿಗೆ, 2019ರಲ್ಲಿ ಇ-ಆಸ್ತಿ ತಂತ್ರಾಂಶದೊಂದಿಗೆ,2020ರಲ್ಲಿ ಬಿಡಿಎ ಹಾಗೂ ಬಿಬಿಎಂಪಿ ತಂತ್ರಾಂಶಗಳೊಂದಿಗೆ ಸಂಯೋಜಿಸಲಾಗಿದ್ದು, ಇದರಿಂದಾಗಿ ಸರ್ವರ್‌ಗೆ ಹೆಚ್ಚುವರಿ ಒತ್ತಡ ಇರುತ್ತದೆ. ಸಂಯೋಜನೆಯಾಗಿರುವ ಇತರೆ ಇಲಾಖೆಯ ತಂತ್ರಾಂಶದಲ್ಲಿ ಯಾವುದೇ ಸಮಸ್ಯೆ ಉಂಟಾದಲ್ಲಿ ಅದು ಕಾವೇರಿ ತಂತ್ರಾಂಶದಲ್ಲಿ ಪ್ರತಿಬಿಂಬಿಸಿ ನೋಂದಣಿಗೆ ತೊಂದರೆಯಾಗುತ್ತದೆ.<br><br>ಉದಾಹರಣೆಗೆ ದಿನಾಂಕ: 08-03-2021 ರಂದು ಓ.ಟಿ.ಪಿ ಸಮಸ್ಯೆ ಉಂಟಾಗಿದ್ದು, ಇದು ಕಾವೇರಿ ತಂತ್ರಾಂಶದ ಸಮಸ್ಯೆ ಆಗಿರುವುದಿಲ್ಲ. ಇದು e-Governance ಇಲಾಖೆಯ ಅಡಿ ಬರುವ Directorate of Electronic Delivery of Citizen Services (EDCS)ರವರ SMS ಸೇವೆಯಲ್ಲಿನ ಸಮಸ್ಯೆಯಾಗಿರುತ್ತದೆ. ಸದರಿ ದಿನದಂದು ಸುಮಾರು 5 ಗಂಟೆಯವರೆಗೆ ಇತರ ಇಲಾಖೆಯೊಂದಿಗೆ ಸಂಪರ್ಕಿಸಿ, ಸಮಸ್ಯೆ ಪರಿಹರಿಸಿ, ನೋಂದಣಿ ಪ್ರಾರಂಭಿಸಲಾಗಿರುತ್ತದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಉಪನೋಂದಣಿ ಕಛೇರಿಗಳಲ್ಲಿರುವ ಯುಪಿಎಸ್ ಮತ್ತು ಬ್ಯಾಟರಿಗಳು 07 ವರ್ಷ ಹಳೆಯದಾಗಿದ್ದು, ಇವುಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸದೆ ಇರುವುದರಿಂದ ಕೆಲವೊಮ್ಮೆ ಸರ್ವರ್‌ಗಳು **abrupt shutdown** ಗೆ ಒಳಗಾಗಿ ಡೇಟಾಬೇಸ್ ಕ್ರಾಶ್ ಆಗುತ್ತದೆ. ಉಪನೋಂದಣಿ ಕಛೇರಿಗಳಿಗೆ ಹೊಸ ಯುಪಿಎಸ್ ಮತ್ತು ಬ್ಯಾಟರಿಗಳನ್ನು ಖರೀದಿಸಲು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ದಿನಾಂಕ: 04-03-2021 ರಂದು ಟೆಂಡರ್ ಪ್ರಕಟಿಸಲಾಗಿರುತ್ತದೆ. |
| ಈ) | ಹೆಚ್ಚು ಒತ್ತಡ ಇರುವ ಉಪನೋಂದಣಿ ಕಛೇರಿಗಳಲ್ಲಿ ಹೆಚ್ಚುವರಿ ಕಛೇರಿಗಳನ್ನು ತೆರೆದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಮೈಸೂರು ನಗರದಲ್ಲಿ ಈಗಾಗಲೇ ನಾಲ್ಕು ಉಪನೋಂದಣಿ ಕಛೇರಿಗಳು ಹಾಗೂ ಹುಬ್ಬಳ್ಳಿ ನಗರದಲ್ಲಿ ಎರಡು ಉಪನೋಂದಣಿ ಕಛೇರಿಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.<br>ಬೆಳಗಾವಿ ಮತ್ತು ತುಮಕೂರು ನಗರಗಳಲ್ಲಿ ಹಾಲಿ ಒಂದು ಉಪನೋಂದಣಿ ಕಛೇರಿಯಿದ್ದು, ಇನ್ನೊಂದು ಉಪನೋಂದಣಿ ಕಛೇರಿಯನ್ನು ತೆರೆಯಲು ಸರ್ಕಾರವು ಅನುಮತಿ ನೀಡಿದ್ದು, ಸದರಿ ಕಛೇರಿಗಳನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುತ್ತದೆ. |

ಸಂಖ್ಯೆ: ಕಂಇ/125/ಎಂಎನ್‌ಎಸ್‌ಎ/2021

**(ಆರ್.ಅಶೋಕ್)**
**ಕಂದಾಯ ಸಚಿವರು**